ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 15/10/2020

# ಗ್ರಾಪಂ ಎಲೆಕ್ಷನ್ ಸದ್ಯಕ್ಕೆ ಬೇಡ: ಸರ್ವಪಕ್ಷ ಒತ್ತಡ

## ಕೊರೋನಾ ಹೆಚ್ಚಳವಾಗಿದೆ, ನಡೆಸಬೇಡಿ ಶೀಘ್ರ ಚುನಾವಣಾ ಆಯೋಗಕ್ಕೆ ಮನವಿ






• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕೊರೋನಾ ಸೋಂಕು ರಾಜ್ಯದಲ್ಲಿ ತೀವ್ರವಾಗಿ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸದ್ಯಕ್ಕೆ ಗ್ರಾಮ ಪಂಚಾಯತಿ ಸಾರ್ವತ್ರಿಕ ಚುನಾವಣೆ ನಡೆಸುವುದು ಸೂಕ್ತವಲ್ಲ ಎಂದು ಪ್ರಮುಖ ರಾಜಕೀಯ ಪಕ್ಷಗಳು ಕಳಕಳಿಯ ಒಮ್ಮತಾಭಿಪ್ರಾಯ ವ್ಯಕ್ತಪಡಿಸಿವೆ.

ಚುನಾವಣೆ ನಡೆಸುವ ಸಂಬಂಧ ಹೈಕೋರ್ಟ್‌ಗೆ ತನ್ನ ನಿಲುವನ್ನು ಸರ್ಕಾರ ತಿಳಿಸಬೇಕು ಎಂದು ಚುನಾವಣಾ ಆಯೋಗವು ಮಂಗಳವಾರ ಗ್ರಾಮೀಣಾಭಿವೃದ್ಧಿ ಇಲಾಖೆ ಪ್ರಧಾನ ಕಾರ್ಯದರ್ಶಿಗಳಿಗೆ ಪತ್ರ ಬರೆದಿತ್ತು. ಮುಂದಿನ 2021ನೇ ಸಾಲಿನಲ್ಲಿ ಇತರ ಹಲವು ಚುನಾವಣೆಗಳನ್ನು ನಡೆಸಬೇಕಾಗಿರುವುದರಿಂದ ಗ್ರಾ.ಪಂ. ಸಾರ್ವತ್ರಿಕ ಚುನಾವಣೆಯನ್ನು ಇದೇ ವರ್ಷದ ಅಂತ್ಯದೊಳಗಾಗಿ (ಡಿಸೆಂಬರ್ ಒಳಗಾಗಿ) ನಡೆಸುವುದು ಅನಿವಾರ್ಯ ಎಂದು ಆ ಪತ್ರದಲ್ಲಿ ತಿಳಿಸಿತ್ತು.

↘ 9

ಗ್ರಾಪಂ ಎಲೆಕ್ಷನ್ ಸದ್ಯಕ್ಕೆ ಬೇಡ: ಸರ್ವಪಕ್ಷ ಒತ್ತಡ

↙ ಮೊದಲ ಪುಟದಿಂದ

ಇದರ ಬೆನ್ನಲ್ಲೇ ಸದ್ಯಕ್ಕೆ ಚುನಾವಣೆ ನಡೆಸುವುದು ಸರಿಯಲ್ಲ ಎಂಬ ಅಭಿಪ್ರಾಯವನ್ನು ರಾಜಕೀಯ ಪಕ್ಷಗಳ ನಾಯಕರು ಹೊಂದಿದ್ದಾರೆ. ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಪ್ರತಿಪಕ್ಷದ ನಾಯಕರಾದ ಸಿದ್ದರಾಮಯ್ಯ, ಎಚ್.ಡಿ.ಕುಮಾರಸ್ವಾಮಿ ಅವರು ಸದ್ಯಕ್ಕೆ ಚುನಾವಣೆ ನಡೆಸುವುದು ಸೂಕ್ತವಲ್ಲ ಎಂಬ ನಿಲುವಿಗೆ ಬಂದಿದ್ದಾರೆ ಎಂದು ತಿಳಿದು ಬಂದಿದೆ.

ಚುನಾವಣೆಯನ್ನು ಸದ್ಯಕ್ಕೆ ನಡೆಸುವುದು ಬೇಡ ಎಂಬ ಅಭಿಪ್ರಾಯದೊಂದಿಗೆ ಮುಂದಿನ ದಿನಗಳಲ್ಲಿ ರಾಜ್ಯದ ಮೂರು ಪ್ರಮುಖ ರಾಜಕೀಯ ಪಕ್ಷಗಳಾದ ಬಿಜೆಪಿ, ಕಾಂಗ್ರೆಸ್ ಮತ್ತು ಜೆಡಿಎಸ್‌ನ ಮುಖಂಡರು ರಾಜ್ಯ ಚುನಾವಣಾ ಆಯೋಗಕ್ಕೆ ಮನವಿ ಸಲ್ಲಿಸುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.

ಕೋವಿಡ್ ಸಂಕಷ್ಟದ ಸಮಯದಲ್ಲಿ ವಿಧಾನ ಸಭೆ, ವಿಧಾನಪರಿಷತ್ ಉಪಚುನಾವಣೆ ನಡೆಸುವುದು ಬೇರೆ. ಗ್ರಾಮ ಪಂಚಾಯತಿ ಚುನಾವಣೆ ನಡೆಸುವುದು ಅಷ್ಟು ಸುಲಭವಲ್ಲ. ಅಲ್ಲಿ ಸಾಮಾಜಿಕ ಅಂತರ ಕಾಪಾಡುವುದು ಕಷ್ಟಸಾಧ್ಯ. ಈ ಚುನಾವಣೆ ಮುಂದೂಡುವುದರಿಂದ ಆಡಳಿತದಲ್ಲಿ ಅಂಥ ಪ್ರಮುಖ ವ್ಯತ್ಯಾಸಗಳಾಗಲಿ ಅಥವಾ ಸಮಸ್ಯೆಯಾಗಲಿ ಉಂಟಾಗುವುದಿಲ್ಲ ಎಂದು ಪ್ರಮುಖ ರಾಜಕೀಯ ಪಕ್ಷಗಳ ಮುಖಂಡರು ಒಮ್ಮತದ ಅಭಿಪ್ರಾಯಕ್ಕೆ ಬಂದಿದ್ದಾರೆ.